ಹುಬ್ಬಳ್ಳಿ ಕರ್ನಾಟಕ ಮೆಡಿಕಲ್ ಕಾಲೇಜಿನಲ್ಲಿರುವ ಖಾಲಿಯಿರುವ ಬೋಧಕರ ಹುದ್ದೆಗಳು.

388 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಹುಬ್ಬಳ್ಳಿ ಮೆಡಿಕಲ್ ಕಾಲೇಜಿನಲ್ಲಿರುವ ಬೋಧನಾ ಹುದ್ದೆಗಳೆಷ್ಟು?

2) ಅವುಗಳಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ?

3) ಖಾಲಿ ಇರುವ ಹುದ್ದೆಗಳನ್ನು ಸರ್ಕಾರದವರು ಎಂದು ಭರ್ತಿ ಮಾಡುವರು?

ಶ್ರೀ ಎ.ಬಿ. ಪಾಟೀಲ್ (ವೈದ್ಯಕೀಯ ಶಿಕ್ಷಣ ಸಚಿವರು) :

1)	ಪ್ರಾಧ್ಯಾಪಕರು	-	46
	ಸಹಾಯಕ ಪ್ರಾಧ್ಯಾಪಕರು	-	58
	ಉಪನ್ಯಾಸಕರು	-	105
2)	ಪ್ರಾಧ್ಯಾಪಕರು	-	12
	ಸಹಾಯಕ ಪ್ರಾದ್ಯಾಪಕರು	-	24
	ಉಪನ್ಯಾಸಕರು	-	34

3) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. ಹಾಗೂ ಇತ್ತೀಚೆಗೆ ಕೆ.ಎಂ.ಸಿ. ಹುಬ್ಬಳ್ಳಿ ವೈದ್ಯಕೀಯ ಕಾಲೇಜನ್ನು ಸ್ವಾಯತ್ತ ಸಂಸ್ಥೆಯೇ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಬಹುದಾಗಿದೆ.

ಹುಬ್ಬಳ್ಳಿ ನಗರದಲ್ಲಿರುವ ಆರೋಗ್ಯ ಕೇಂದ್ರಗಳು.

389 - ಶ್ರೀ ಜಗದೀಶ್ ಶೆಟ್ಟರ್(ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ನಗರದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು?

ಆ) ನಗರವು ದಿನೇ ದಿನೇ ಬೆಳೆಯುತ್ತಿರುವ ಪ್ರಯುಕ್ತ ಬೆಳವಣಿಗೆಗನುಗುಣವಾಗಿ ಹೆಚ್ಚಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ತೆರೆಯಲು ಸರ್ಕಾರದವರು ಪರಿಶೀಲಿಸುವರೇ?

ಇ) ಹಾಗಿದ್ದಲ್ಲಿ ಎಷ್ಟು ಕೇಂದ್ರಗಳನ್ನು ಪ್ರಾರಂಭಿಸುವ ವಿಷಯ ಸರ್ಕಾರದ ಮುಂದಿದೆಯೇ?

ಶ್ರೀ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಪ್ರಾಥಮಿಕ ಆರೋಗ್ಯ ಕೇಂದ್ರಗಳು ಹುಬ್ಬಳ್ಳಿ ನಗರದಲ್ಲಿರುವುದಿಲ್ಲ.

ಆ) ನಗರಪಾಲಿಕೆಯ ಅಧಿಕಾರ ವ್ಯಾಪ್ತಿಗೆ ಬರುವುದರಿಂದ ಈ ಬಗ್ಗೆ ನಗರ ಪಾಲಿಕೆಯು ಕ್ರಮ ಕೈಗೊಳ್ಳಬೇಕಾಗಿರುತ್ತದೆ.

ಇ) ಉದ್ಭವಿಸುವುದಿಲ್ಲ.